# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1119 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 25/07/2024 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

*****

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರವಾಸೋದ್ಯಮ ಇಲಾಖೆಯಿಂದ ಬಾಗಲಕೋಟೆ ಜಿಲ್ಲೆಯಲ್ಲಿ 2.47 ಕೋಟಿ ಹಣ ಅಕ್ರಮವಾಗಿ ವರ್ಗಾವಣೆ ಆಗಿರುವುದು ನಿಜವೇ; ಹಾಗಿದ್ದಲ್ಲಿ ಈ ಪ್ರಕರಣ ಯಾವಾಗ ಬೆಳಕಿಗೆ ಬಂದಿದೆ; (ಮಾಹಿತಿ ನೀಡುವುದು) | ಹೌದು.<br><br>ಉಪ ನಿರ್ದೇಶಕರು ಪ್ರವಾಸೋದ್ಯಮ ಇಲಾಖೆ ಬಾಗಲಕೋಟೆರವರು ದಿನಾಂಕ:10.07.2024ರಂದು ಐಡಿಬಿಐ ಬ್ಯಾಂಕ್, ಬಾಗಲಕೋಟೆ ಶಾಖೆಗೆ ಭೇಟಿ ನೀಡಿ, ಸದರಿ ಬ್ಯಾಂಕಿನಲ್ಲಿರುವ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ಬಾಗಲಕೋಟೆ ಇವರ ಖಾತೆಗಳ ಬ್ಯಾಂಕ್ ಸ್ಟೇಟ್‌ಮೆಂಟ್ ಪಡೆದು, ಪರಿಶೀಲಿಸಿದಾಗ ಸದರಿ ಖಾತೆಗಳಿಂದ ಹಣ ಅನಧಿಕೃತ ವರ್ಗಾವಣೆ ಆಗಿರುವುದು ಕಂಡುಬಂದಿರುತ್ತದೆ ಹಾಗೂ ಈ ವಿಷಯದ ಕುರಿತು ಶ್ರೀ ಗೋಪಾಲ ಸತ್ಯಪ್ಪ ಹಿತ್ತಲಮನಿ, ಉಪ ನಿರ್ದೇಶಕರು(ಪ್ರ), ಪ್ರವಾಸೋದ್ಯಮ ಇಲಾಖೆ ಬಾಗಲಕೋಟೆರವರು ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಬಾಗಲಕೋಟೆ ಇವರ ಸೂಚನೆ ಮೇರೆಗೆ ದಿನಾಂಕ:11.07.2024ರಂದು ಪೊಲೀಸ್ ಇನ್ಸ್‌ಪೆಕ್ಟರ್, ಸಿ.ಈ.ಎನ್. ಕ್ರೈಂ ಪೊಲೀಸ್ ಠಾಣೆ, ಬಾಗಲಕೋಟೆ ಇಲ್ಲಿ ಪ್ರಕರಣದ ಬಗ್ಗೆ ದೂರನ್ನು ದಾಖಲಿಸಿರುತ್ತಾರೆ. |
| ಆ) | ಈ ಪ್ರಕರಣದ ಕುರಿತು ಪೊಲೀಸ್ ಠಾಣೆಗೆ ಯಾರು ಹಾಗೂ ಯಾವ ದಿನಾಂಕದಂದು ದೂರು ದಾಖಲಿಸಿದ್ದಾರೆ; | |
| ಇ) | ಈ ಪ್ರಕರಣದ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? | ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ:ಪ್ರಇ/ಆಡಳಿತ-1/36/2024-25, ದಿನಾಂಕ:15.07.2024ರಲ್ಲಿ ಬಾಗಲಕೋಟೆ ಜಿಲ್ಲೆಯ ಉಪ ನಿರ್ದೇಶಕರ ಕಛೇರಿಗೆ ಸಂಬಂಧಿಸಿದ IDBI ಬ್ಯಾಂಕಿನಲ್ಲಿ ನಡೆದಿರುವ ಹಣದ ಅವ್ಯವಹಾರದ ಬಗ್ಗೆ ತನಿಖೆ ನಡೆಸಲು ಈ ಕೆಳಕಂಡ ಅಧಿಕಾರಿಗಳನ್ನೊಳಗೊಂಡ ಸಮಿತಿ ರಚಿಸಲಾಗಿರುತ್ತದೆ.<br><br>1) ಆಡಳಿತಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ ಜಿಲ್ಲೆ,<br>2) ಶ್ರೀಮತಿ. ಸೌಮ್ಯ ಎಂ ಬಾಪಟ್, ಜಂಟಿ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಳಗಾವಿ ಜಿಲ್ಲೆ<br>3) ಶ್ರೀಮತಿ. ಚಿತ್ರ ಪಿ.ಎಸ್. ಲೆಕ್ಕಾಧಿಕಾರಿಗಳು, ಲೆಕ್ಕಪತ್ರ ಶಾಖೆ, ಪ್ರವಾಸೋದ್ಯಮ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು<br><br>ಸದರಿ ತನಿಖಾ ತಂಡದ ಅಧಿಕಾರಿಗಳು ದಿನಾಂಕ:16.07.2024 ಮತ್ತು 17.07.2024ರಂದು ಬಾಗಲಕೋಟೆ ಕಛೇರಿಗೆ ಭೇಟಿ ನೀಡಿ ಮಾಹಿತಿಗಳನ್ನು ಸಂಗ್ರಹಿಸಿರುತ್ತಾರೆ ಹಾಗೂ ಸೂಪರಿಂಟೆಂಡೆಂಟ್ ಆಫ್ ಪೊಲೀಸ್, ಬಾಗಲಕೋಟೆ ಸಿ.ಈ.ಎನ್., ವಿಭಾಗದ (wing) ಕಛೇರಿ, ಇವರ ಸಮನ್ವಯದೊಂದಿಗೆ ತನಿಖೆ ನಡೆಸಿ ತನಿಖಾ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆಯು ಪ್ರಾರಂಭ ಹಂತದಲ್ಲಿರುವುದರಿಂದ ತನಿಖೆ ಪೂರ್ಣಗೊಳಿಸಿ ವಿವರವಾದ ವರದಿಯು CEN ಕ್ರೈಮ್ ಪೊಲೀಸ್ ಠಾಣೆ, ಬಾಗಲಕೋಟೆ ಇವರಿಂದ ಸ್ವೀಕೃತವಾದ ನಂತರ ನಿಯಮಾನುಸಾರ ಸಂಬಂಧಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಟಿಒಆರ್ 208 ಟಿಡಿವಿ 2024

(ಹೆಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು